RNU AIR DHARWAD

# JANUARY 11,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ, ಪರೀಕ್ಷಾ ಪೇ ಚರ್ಚಾ 8ನೇ ಆವೃತ್ತಿಗೆ, ದೇಶ, ವಿದೇಶಗಳ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋ ‘ಕರು ಸೇರಿ, 2 ಕೋಟಿ 70 ಲಕ್ಷಕ್ಕೂ ಅಧಿಕ ಜನ ಹೆಸರು ನೋಂದಾಯಿಸಿದ್ದಾರೆ. ಮೈ ಜಿಒವಿ ಡಾಟ್ ಇನ್ ನಲ್ಲಿ, ಆನ್ ಲೈನ್ ನೋಂದಣಿ ಪ್ರಕ್ರಿಯೆ ಈ ತಿಂಗಳ 14ರ ವರೆಗೆ ನಡೆಯಲಿದೆ. ಪರೀಕ್ಷೆಗೆ ಸಂಬಂಧಿಸಿದ ಒತ್ತಡವನ್ನು, ಕಲಿಕೆ ಮತ್ತು ಹಬ್ಬದಾಚರಣೆಯಾಗಿ ಪರಿವರ್ತಿಸುವ, ರಾಷ್ಟ್ರವ್ಯಾಪಿ ಆಂದೋಲನವಾಗಿದೆ.

<><><>

ಕನಿಷ್ಟ ಬೆಂಬಲ ಬೆಲೆ ಯೋಜನೆ ಅಡಿ, ಶೇಂಗಾ ಖರೀದಿ ಕೇಂದ್ರಗಳನ್ನು, ಕೊಪ್ಪಳ, ಧಾರವಾಡ, ಹಾವೇರಿ, ಬಳ್ಳಾರಿ, ಚಿತ್ರದುರ್ಗ, ಗದಗ, ಬಾಗಲಕೋಟೆ, ದಾವಣಗೆರೆ, ರಾಯಚೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಆರಂಭಿಸಲಾಗಿದೆ ಎಂದು, ಕೃಷಿ ಮಾರುಕಟ್ಟೆ ಖಾತೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಈ ವಿಷಯ ಪ್ರಕಟಿಸಿರುವ ಅವರು, ಶೇಂಗಾ ಖರೀದಿಗೆ ರೈತರು ಇದೇ 20ರ ವರೆಗೆ ಹಾಗೂ ಹೆಸರು ನೋಂದಾಯಿಸಬಹುದು; ಶೇಂಗಾ ಖರೀದಿ ಅವಧಿಯನ್ನು, 22ರ ವರೆಗೆ ವಿಸ್ತರಿಸಲಾಗಿದೆ ಎಂದು ಹೇಳಿದ್ದಾರೆ. ಶೇಂಗಾ ಬೆಲೆ ಪ್ರತಿ ಕ್ವಿಂಟಾಲ್‌ಗೆ 6 ಸಾವಿರದ 783 ರೂಪಾಯಿ ನಿಗದಿ ಪಡಿಸಲಾಗಿದೆ.

<><><>

ಕಳೆದ ನವಂಬರ್ ತಿಂಗಳಲ್ಲಿ ಜರುಗಿದ, ಚಾರ್ಟಡ್ ಅಕೌಂಟೆಂಟ್ ಅಂತಿಮ ಪರೀಕ್ಷೆಯಲ್ಲಿ ವಿಜಯಪುರದ ದೃಷ್ಟಿ ಜೈನ್ ಅವರು 474 ಅಂಕ ಪಡೆದು, ರಾಷ್ಟ್ರಮಟ್ಟದಲ್ಲಿ 11 ನೇ ರ್‍ಯಾಂಕ್ ಗಳಿಸಿದ್ದಾರೆ. ಪ್ರಥಮ ಪ್ರಯತ್ನದಲ್ಲೇ ಸಿ.ಎ ಪರೀಕ್ಷೆಯನ್ನು ಉನ್ನತ ಶ್ರೇಣಿಯೊಂದಿಗೆ ತೇರ್ಗಡೆಯಾಗಿರುವ ಅವರು, ಪ್ರದೇಶ ಸಮಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ದೃಷ್ಟಿ ಜೈನ್ 31 ಸೆಕೆಂದುಗಳು

<><><>

ಉಪರಾಷ್ಟ್ರಪತಿ ಜಗದೀಪ್ ಧನಖರ್ ಹಾಗೂ ಅವರ ಪತ್ನಿ ಸುದೇಶ ಧನಖರ್ ಅವರು ಇಂದು ಬೆಂಗಳೂರಿಗೆ ಆಗಮಿಸಿದರು. ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಲಾಗಿರುವ ವಿವಿಧ ರಾಜ್ಯಗಳ ಲೋಕಸೇವಾ ಆಯೋಗಗಳ 25ನೇ ರಾಷ್ಟ್ರೀಯ ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಅವರು ಭಾಗವಹಿಸಲಿದ್ದಾರೆ. ನಂತರ, ಬಿಇಎಲ್ ಹಾಗೂ ಬಿಹೆಚ್ಇಎಲ್ ಕಾರ್ಯಕ್ರಮಗಳಲ್ಲಿ ಅವರು ಭಾಗವಹಿಸಲಿದ್ದಾರೆ. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಬಂದಿಳಿದ ಉಪರಾಷ್ಟ್ರಪತಿ ದಂಪತಿಯನ್ನು, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಸ್ವಾಗತಿಸಿದರು.

<><><>

ಕರ್ನಾಟಕ ಯಕ್ಷಗಾನ ಆಕಾಡೆಮಿ, 2024 ನೇ ಸಾಲಿನ ವಿವಿಧ ಪ್ರಶಸ್ತಿಗಳನ್ನು ಘೋಷಿಸಿದೆ. ಪಾರ್ತಿಸುಬ್ಬ ಪ್ರಶಸ್ತಿಗೆ ಹಿರಿಯ ಹಿಮ್ಮೇಳ ವಾದಕ ಮಾಂಬಾಡಿ ಸುಬ್ರಹ್ಮಣ್ಯ ಭಟ್ ಆಯ್ಕೆಯಾಗಿದ್ದಾರೆ ಎಂದು ಅಕಾಡೆಮಿ ಅಧ್ಯಕ್ಷ ತಲ್ಲೂರು ಶಿವರಾಮ ಶೆಟ್ಟಿ ಅವರು ಮಾಹಿತಿ ನೀಡಿದ್ದಾರೆ. ಪ್ರಶಸ್ತಿ ಒಂದು ಲಕ್ಷ ರೂಪಾಯಿ ನಗದು ಬಹುಮಾನ ಒಳಗೊಂಡಿದೆ. ಫೆಬ್ರುವರಿ 16 ರಂದು ಉಡುಪಿ ಯಕ್ಷಗಾನ ಕಲಾರಂಗ ಸಭಾಂಗಣದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ ಎಂದು ಅವರು ತಿಳಿಸಿದರು.

<><><>

ಬೆಳಗಾವಿಯಲ್ಲಿ 21 ನೇ ತಾರೀಖಿನಂದು ಗಾಂಧಿ ಭಾರತ ಕಾರ್ಯಕ್ರಮದ ಅಂಗವಾಗಿ ನಡೆಯಲಿರುವ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಹಾಗೂ 100 ಕಾಂಗ್ರೆಸ್ ಕಚೇರಿ ನಿರ್ಮಾಣದ ಬಗ್ಗೆ ಹಿರಿಯ ನಾಯಕರ ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಗೃಹ ಕಚೇರಿ ಕೃಷ್ಣದಲ್ಲಿ ಮಾತನಾಡಿದ ಅವರು ಈಗಾಗಲೇ 72 ಕಡೆ ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ಅರ್ಜಿಗಳು ಬಂದಿವೆ. ಉಳಿದೆಡೆಗಳಲ್ಲಿ ಸೇರಿ 100 ಕಚೇರಿ ನಿರ್ಮಾಣ ಮಾಡಲಾಗುವುದು ಎಂದರು.

<><><>

ಸರ್ಕಾರದ ಮುಂದೆ ಶರಣಾಗತರಾದ 6 ಜನ ನಕ್ಸಲರ ಶಸ್ತ್ರಾಸ್ತ್ರಗಳು ಹಾಗೂ ಮದ್ದು ಗುಂಡುಗಳನ್ನು ಚಿಕ್ಕಮಗಳೂರು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಶರಣಾಗತಿಯಾದ ನಕ್ಸಲರು ನೀಡಿದ ಮಾಹಿತಿ ಮೇರೆಗೆ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲೂಕಿನ, ಕಿತ್ತಲೆಗುಳಿ ಅರಣ್ಯ ಪ್ರದೇಶದಲ್ಲಿ ಶಸ್ತ್ರಗಳನ್ನು ವಶ ಪಡೆಯಲಾಗಿದೆ. ನಕ್ಸಲರಿಗೆ ಸೇರಿದ ಎಕೆ 56 ರೈಫಲ್, ದೇಸಿ ನಿರ್ಮಿತ ಪಿಸ್ತೂಲ್ ಸೇರಿ ಒಟ್ಟು 6 ಶಸ್ತ್ರಗಳನ್ನು, ಒಟ್ಟು 176 ಮದ್ದು ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಜಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ಹೇಳಿದರು.

<><><>

ಉತ್ತರಕನ್ನಡ ಜಿಲ್ಲೆ ವ್ಯಾಪ್ತಿಯ, ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ, ಭಾರತೀಯ ಭೂಗರ್ಭ ಸಮೀಕ್ಷಾಲಯದ ತಜ್ಞರು ಗುರುತಿಸಿರುವ, ಗುಡ್ಡ ಕುಸಿತದ ಅಪಾಯವಿರುವ ಸ್ಥಳಗಳಲ್ಲಿ, ಮಳೆಗಾಲ ಆರಂಭವಾಗುವ ಮುನ್ನ, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ, ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ, ಸೂಚಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>